**2004 ರ ಕರ್ನಾಟಕ ಅಧಿನಿಯಮ ಸಂಖ್ಯೆ 7**

**ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ಅಧಿನಿಯಮ, 2004**

**ಪ್ರಕರಣಗಳ ಪಟ್ಟಿ**

**ಪ್ರಕರಣಗಳು**

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ

2. 13ನೇ ಪ್ರಕರಣದ ತಿದ್ದುಪಡಿ

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) ಅಧಿನಿಯಮ, 1990ರ ಅಡಿಯಲ್ಲಿ ರಚಿಸಿದ ನಿಯಮಗಳನ್ನು ರಾಜ್ಯ ವಿಧಾನ ಮಂಡಲದ ಉಭಯ ಸದನಗಳ ಮುಂದೆ ಮಂಡಿಸುವುದಕ್ಕಾಗಿ ಉಪಬಂಧ ಕಲ್ಪಿಸಲು ಸದರಿ ಅಧಿನಿಯಮದ 13ನೇ ಪ್ರಕರಣವನ್ನು ತಿದ್ದುಪಡಿ ಮಾಡುವುದು ಅವಶ್ಯವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

(2004ರ ವಿಧಾನ ಪರಿಷತ್ತಿನ ವಿಧೇಯಕ ಸಂಖ್ಯೆ 3)

(ಭಾರತ ಸಂವಿದಾನದ 15(4) ಹಾಗೂ 16(4)ನೇ ಅನುಚ್ಛೇದ ಹಾಗೂ ಏಳನೇ ಅನುಸೂಚಿಯ ಮೂರನೇ ಪಟ್ಟಿಯ 23ನೇ ನಮೂದು)

**2004 ರ ಕರ್ನಾಟಕ ಅಧಿನಿಯಮ ಸಂಖ್ಯೆ 7**

(2004 ರ ಫೆಬ್ರವರಿ ಇಪ್ಪತ್ಮೂರನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ಅಧಿನಿಯಮ, 2004**

(2004 ರ ಫೆಬ್ರವರಿ ಇಪ್ಪತ್ತೆರಡನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) ಅಧಿನಿಯಮ, 1990ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) ಅಧಿನಿಯಮ, 1990ನ್ನು (1991ರ ಕರ್ನಾಟಕ ಅಧಿನಿಯಮ 7) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು, ಭಾರತ ಗಣರಾಜ್ಯದ ಐವತ್ತೈದನೇಯ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

1. **ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು, ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ಅಧಿನಿಯಮ, 2004 ಎಂದು ಕರೆಯತಕ್ಕದ್ದು.

(2) ಇದು, ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

2. **13ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ಅಧಿನಿಯಮ, 1990ರ 13ನೇ ಪ್ರಕರಣದಲ್ಲಿ, (2)ನೇ ಉಪ-ಪ್ರಕರಣದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"(3) ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ ಸಾಧ್ಯವಾದಷ್ಟು ಬೇಗನೆ, ರಾಜ್ಯ ವಿಧಾನ ಮಂಡಲದ ಪ್ರತಿಯೊಂದು ಸದನದ ಮುಂದೆ, ಅದು ಅಧಿವೇಶನದಲ್ಲಿರುವಾಗ ಒಂದು ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನದ ಅಥವಾ ನಿರಂತರ ಅಧಿವೇಶನದ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಆ ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಬೇಕೆಂದು ಉಭಯ ಸದನಗಳು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸಕೂಡದೆಂದು ಉಭಯ ಸದನಗಳು ಒಪ್ಪಿದರೆ, ಆ ತರುವಾಯ ಆ ನಿಯಮವು ಸಂದರ್ಭಾನುಸಾರ ಹಾಗೆ ಮಾರ್ಪಾಡಾದ ರೂಪದಲ್ಲಿ ಮಾತ್ರವೇ ಪರಿಣಾಮಕಾರಿಯಾಗತಕ್ಕದ್ದು ಅಥವಾ ಪರಿಣಾಮಕಾರಿಯಾಗತಕ್ಕದ್ದಲ್ಲ, ಆದಾಗ್ಯೂ ಅಂಥ ಯಾವುದೇ ಮಾರ್ಪಾಡು ಅಥವಾ ರದ್ದತಿಯು, ಆ ನಿಯಮದ ಅಡಿಯಲ್ಲಿ ಹಿಂದೆ ಮಾಡಿದ ಯಾವುದೇ ಕಾರ್ಯದ ಸಿಂಧುತ್ವಕ್ಕೆ ಬಾಧೆಯುಂಟು ಮಾಡತಕದ್ದಲ್ಲ."

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

**ಮ.ರಾ. ಹೆಗಡೆ**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.

---

ಕರ್ನಾಟಕ ರಾಜ್ಯ ಪತ್ರದ ಭಾಗ-IVಎ ವಿಶೇಷ ಪತ್ರಿಕೆ ಸಂಖ್ಯೆ: 259 ದಿನಾಂಕ: 23.2.2004 ರಲ್ಲಿ ಪ್ರಕಟಿತ ಕಡತ ಸಂಖ್ಯೆ: ಸಂವ್ಯಶಾಇ 39 ಶಾಸನ 2003